**ಸಾಕ್ಷಿಯನ್ನು ದಿಃ 28.02.2025 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಸಂಸ್ಥೆಯವರು ನೀಡಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು, ನಿಆರ್. 1 ಎಂದು, ವಿಮಾ ಪಾಲಿಸಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಆರ್. 2 ಎಂದು, ವಾಹನ ಮಾಲೀಕರಿಗೆ ಕಳುಹಿಸಿರುವ ನೋಟೀಸ್ ಅನ್ನು ಹಾಜರು ಪಡಿಸಿದ್ದು ನಿಆರ್.3 ಎಂದು ಗುರುತಿಸಲಾಯಿತು. ಆದುದರಿಂದ ಅರ್ಜಿಯನ್ನು ವಜಾಗೊಳಿಸಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ಅಪಘಾತ ಸಮಯದಲ್ಲಿ ಪ್ರಶ್ನಿತ ವಾಹನಕ್ಕೆ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಮೃತನ ವಾಹನದ ವಿರುದ್ಧ ದೋಷರೋಪಣಾ ಪಟ್ಟಿ ಸಲ್ಲಿಸಿರುವುದಿಲ್ಲ ಎಂದರೆ ಸರಿ. ಪ್ರಶ್ನಿತ ವಾಹನ ಚಾಲಕನ ಅಜಾಗರೂಕತೆಯಿಂದ ಅಪಘಾತ ಆಗಿರುತ್ತದೆ ಎಂದರೆ ಸರಿ. ಮುಂದುವರೆದು ಸಾಕ್ಷಿಯು ಸದರಿ ಚಾಲಕನು ಮಧ್ಯಪಾನ ಮಾಡಿಕೊಂಡು ಚಾಲನ ಪರವಾನಗಿ ಇಲ್ಲದೇ ವಾಹನವನ್ನು ಚಲಾಯಿಸುತ್ತಿದ್ದ ಎಂದು ಉತ್ತರಿಸಿರುತ್ತಾರೆ. ಪ್ರಶ್ನಿತ ವಾಹನಕ್ಕೆ ಅಪಘಾತ ಸಮಯದಲ್ಲಿ ವಿಮೆ ಚಾಲ್ತಿಯಲ್ಲಿರುವ ಕಾರಣ ಅರ್ಜಿದಾರರಿಗೆ ನಾವು ಪರಿಹಾರ ನೀಡಲು ಭಾಧ್ಯಸ್ಥರು ಎಂದರೆ ಸರಿಯಲ್ಲ. ಚಾಲಕನಿಗೆ ಚಾಲನ ಪರವಾನಗಿ ಇದೆಯೋ ಇಲ್ಲವೋ ಎಂದು ವಿಚಾರಿಸಿರುವುದಿಲ್ಲ. ದೋಷರೋಪಣಾ ಪಟ್ಟಿಯಲ್ಲಿ ಆ ಬಗ್ಗೆ ನಮೂದಾಗಿದೆ ಎಂದು ಉತ್ತರಿಸಿರುತ್ತಾರೆ. ಪ್ರಶ್ನಿತ ವಾಹನ ಚಾಲಕನಿಗೆ ಆ ದಿನ ಚಾಲನ ಪರವಾನಗಿ ಇತ್ತು ಎಂದರೆ ಸರಿಯಲ್ಲ. ಪರಿಹಾರ ನೀಡುವ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಚಾಲನ ಪರವಾನಗಿ ಇಲ್ಲ

ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.